**All India Radio: Bangalore**
**National Bulletin In Kannada**
**04.09.2026 07.35 a.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**04.09.2026 07.35 a.m.**
*******************

ಮುಖ್ಯಾಂಶಗಳು

1. ಶ್ರೀಹರಿಕೋಟಾದಿಂದ ಭೂಸ್ಥಿರ ಕಕ್ಷೆಗೆ ಭಾರತದ ಮೊದಲ ಇಮೇಜಿಂಗ್ ಉಪಗ್ರಹ ಇಒಎಸ್–05 ಯಶಸ್ವಿ ಉಡಾವಣೆ
2. ವಿದೇಶಿ ದೇಣಿಗೆ ನಿಯಂತ್ರಣ ತಿದ್ದುಪಡಿ ವಿಧೇಯಕ; 31 ಸದಸ್ಯರ ಜಂಟಿ ಸಂಸದೀಯ ಸಮಿತಿ ರಚನೆ
3. ನವದೆಹಲಿಯಲ್ಲಿ ಇಂದಿನಿಂದ ಬ್ರಿಕ್ಸ್ ಮುಖ್ಯ ನ್ಯಾಯಮೂರ್ತಿಗಳ ಶೃಂಗಸಭೆ ಆಯೋಜನೆ
4. ಮಹಿಳಾ ಟಿ–20 ಏಷ್ಯಾಕಪ್ ಕ್ರಿಕೆಟ್; ಹಾಂಗ್‌ಕಾಂಗ್ ವಿರುದ್ಧ ಗೆಲುವು ಸಾಧಿಸಿ ಸೆಮಿಫೈನಲ್‌ಗೆ ಲಗ್ಗೆಯಿಟ್ಟ ಭಾರತ
5. ಚೀನಾ ಮಾಸ್ಟರ್ಸ್ ಬ್ಯಾಡ್ಮಿಂಟನ್: ಕ್ವಾರ್ಟರ್‌ಫೈನಲ್‌ನಲ್ಲಿಂದು ಭಾರತದ ಕಿಡಂಬಿ ಶ್ರೀಕಾಂತ್, ಸಾತ್ವಿಕ್–ಚಿರಾಕ್ ಜೋಡಿ ಕಣದಲ್ಲಿ

***************

ಶ್ರೀಹರಿಕೋಟಾದ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ ಇಂದು ಮುಂಜಾನೆ ಜಿಎಸ್‌ಎಲ್‌ವಿ ರಾಕೆಟ್ ಮೂಲಕ ಭೂಸ್ಥಿರ ಕಕ್ಷೆಗೆ ಭಾರತದ ಮೊದಲ ಇಮೇಜಿಂಗ್ ಉಪಗ್ರಹ 'ಇಒಎಸ್–05' ಅನ್ನು ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ – ಇಸ್ರೋ ಯಶಸ್ವಿಯಾಗಿ ಉಡಾವಣೆ ಮಾಡಿದೆ.

ಅತ್ಯಾಧುನಿಕ ಭೂ ವೀಕ್ಷಣಾ ಉಪಗ್ರಹವಾದ ಇದನ್ನು ಜಿಎಸ್‌ಎಲ್‌ವಿ–ಎಫ್17 ರಾಕೆಟ್, ಉಡಾವಣೆಯಾದ ಸುಮಾರು 18 ನಿಮಿಷಗಳ ನಂತರ ಉಪ–ಭೂಸ್ಥಿರ ಕಕ್ಷೆಗೆ ನಿಖರವಾಗಿ ತಲುಪಿಸಿದೆ ಎಂದು ಇಸ್ರೋ ತಿಳಿಸಿದೆ. 27 ಗಂಟೆಗಳ ಕ್ಷಣಗಣನೆಯ ನಂತರ, 2 ಸಾವಿರದ 367 ಕೆಜಿ ತೂಕದ ಈ ಉಪಗ್ರಹವನ್ನು ಹೊತ್ತ ರಾಕೆಟ್ ಎರಡನೇ ಉಡಾವಣಾ ವೇದಿಕೆಯಿಂದ ಮುಂಜಾನೆ 2.55 ಕ್ಕೆ ಯಶಸ್ವಿಯಾಗಿ ಆಗಸಕ್ಕೆ ಜಿಗಿಯಿತು.

ಈ ನೂತನ ಇಮೇಜಿಂಗ್ ಉಪಗ್ರಹ ಭೂಮಿಯ ನೈಜ ಸಮಯದ ಚಿತ್ರಣಗಳನ್ನು ನೀಡಲಿದ್ದು, ಕೃಷಿ ವಲಯದ ಪ್ರಗತಿ ಹಾಗೂ ಪ್ರಕೃತಿ ವಿಕೋಪ ನಿರ್ವಹಣೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ದೇಶಕ್ಕೆ ಹೆಚ್ಚಿನ ನೆರವು ನೀಡಲಿದೆ.

ಈ ಉಡಾವಣೆ ಬಳಿಕ ಮಾತನಾಡಿದ ಇಸ್ರೋ ಅಧ್ಯಕ್ಷ ವಿ. ನಾರಾಯಣನ್, ಈ ಯಶಸ್ವಿ ಯೋಜನೆಯು ಭಾರತದ ಭೂ ವೀಕ್ಷಣಾ ಸಾಮರ್ಥ್ಯವನ್ನು ಮತ್ತಷ್ಟು ಬಲಪಡಿಸಲಿದ್ದು, ದೇಶದ ಬಾಹ್ಯಾಕಾಶ ಆಧಾರಿತ ಸೇವೆಗಳನ್ನು ಇನ್ನಷ್ಟು ಪರಿಣಾಮಕಾರಿಯಾಗಿ ತಲುಪಿಸಲು ಸಹಕಾರಿಯಾಗಲಿದೆ. ಪ್ರಸಕ್ತ ಹಣಕಾಸು ವರ್ಷದಲ್ಲಿ ಇನ್ನೂ ಆರು ಉಡಾವಣೆಗಳನ್ನು ಕಾರ್ಯಗತಗೊಳಿಸಲು ಯೋಜಿಸಲಾಗಿದೆ ಎಂದು ತಿಳಿಸಿದ್ದಾರೆ.

***************

ವಿದೇಶಿ ದೇಣಿಗೆ ನಿಯಂತ್ರಣ ತಿದ್ದುಪಡಿ ವಿಧೇಯಕ 2026ರ ಪರಿಶೀಲನೆಗಾಗಿ ಕೇಂದ್ರ ಸರ್ಕಾರ 31 ಸದಸ್ಯರ ಜಂಟಿ ಸಂಸದೀಯ ಸಮಿತಿಯನ್ನು ರಚಿಸಿದೆ. ಲೋಕಸಭಾ ಸಂಸದ ಸಂಜಯ್ ಜೈಸ್ವಾಲ್ ಅವರು ಈ ಸಮಿತಿಯ ಅಧ್ಯಕ್ಷತೆ ವಹಿಸಲಿದ್ದಾರೆ.

ಲೋಕಸಭೆಯಿಂದ ಭರ್ತೃಹರಿ ಮಹತಾಬ್, ತೇಜಸ್ವಿ ಸೂರ್ಯ, ನಿಶಿಕಾಂತ್ ದುಬೆ, ಎ. ರಾಜಾ ಮತ್ತು ಸುಪ್ರಿಯಾ ಸುಳೆ ಪ್ರಮುಖ ಸದಸ್ಯರಾಗಿದ್ದರೆ, ರಾಜ್ಯಸಭೆಯಿಂದ ಹರ್ಷವರ್ಧನ್ ಶ್ರಿಂಗ್ಲಾ, ಸಂಜಯ್ ಕುಮಾರ್ ಝಾ, ಪ್ರಫುಲ್ ಪಟೇಲ್ ಹಾಗೂ ಮೇನಕಾ ಗುರುಸ್ವಾಮಿ ಅವರನ್ನು ಸಮಿತಿಗೆ ಸೇರ್ಪಡೆಗೊಳಿಸಲಾಗಿದೆ.

ವಿದೇಶಿ ದೇಣಿಗೆ ನಿಯಂತ್ರಣ ಕಾಯ್ದೆ 2010ಕ್ಕೆ ತಿದ್ದುಪಡಿ ತರುವ ಉದ್ದೇಶ ಹೊಂದಿರುವ ಈ ವಿಧೇಯಕವನ್ನು ಹೆಚ್ಚಿನ ಪರಿಶೀಲನೆಗಾಗಿ ಜಂಟಿ ಸಂಸದೀಯ ಸಮಿತಿಗೆ ವಹಿಸಲು ಸಂಸತ್ತಿನ ಉಭಯ ಸದನಗಳು ಕಳೆದ ಆಗಸ್ಟ್ 12 ರಂದು ಅಂಕಿತ ನೀಡಿದ್ದವು. ವಿದೇಶಿ ದೇಣಿಗೆಗಳ ಬಳಕೆಯಲ್ಲಿ ಹೆಚ್ಚಿನ ಪಾರದರ್ಶಕತೆ ಹಾಗೂ ಹೊಣೆಗಾರಿಕೆಯನ್ನು ತರುವುದು ಈ ನೂತನ ತಿದ್ದುಪಡಿ ವಿಧೇಯಕದ ಮುಖ್ಯ ಉದ್ದೇಶವಾಗಿದೆ.

***************

ಭಾರತದ ಸರ್ವೋಚ್ಚ ನ್ಯಾಯಾಲಯ <u>ಇಂದಿನಿಂದ</u> ನವದೆಹಲಿಯಲ್ಲಿ ಬ್ರಿಕ್ಸ್ ಮುಖ್ಯ ನ್ಯಾಯಮೂರ್ತಿಗಳ ಶೃಂಗಸಭೆ'ಯನ್ನು ಆಯೋಜಿಸಲಿದೆ.

ಬ್ರಿಕ್ಸ್ ಸದಸ್ಯ ರಾಷ್ಟ್ರಗಳು ಹಾಗೂ ಪಾಲುದಾರ ದೇಶಗಳ ಮುಖ್ಯ ನ್ಯಾಯಮೂರ್ತಿಗಳು, ಸುಪ್ರೀಂ ಕೋರ್ಟ್ ಅಧ್ಯಕ್ಷರು ಮತ್ತು ಹಿರಿಯ ನ್ಯಾಯಾಂಗ ಗಣ್ಯರು ಈ ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ.

ನ್ಯಾಯ ವಿತರಣೆ, ಅಂತಾರಾಷ್ಟ್ರೀಯ ವಿವಾದಗಳ ಪರಿಹಾರ, ನ್ಯಾಯಾಂಗದಲ್ಲಿ ಆಧುನಿಕ ತಂತ್ರಜ್ಞಾನ ಹಾಗೂ ಸುಸ್ಥಿರ ಅಭಿವೃದ್ಧಿ ಮುಂತಾದ ಸಮಕಾಲೀನ ವಿಷಯಗಳ ಕುರಿತು ಜಂಟಿ ಚರ್ಚೆ ನಡೆಸಿ, ವಿಚಾರ ವಿನಿಮಯ ಮಾಡಿಕೊಳ್ಳಲು ಈ ವೇದಿಕೆಯು ಅವಕಾಶ ಕಲ್ಪಿಸಲಿದೆ.

ಕಾರ್ಯಕ್ರಮದ ಆರಂಭಿಕ ದಿನದಂದು ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಅವರು ವಿವಿಧ ದೇಶಗಳ ನ್ಯಾಯಾಂಗ ನಿಯೋಗಗಳ ಮುಖ್ಯಸ್ಥರೊಂದಿಗೆ ಸರಣಿ ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ. ರಷ್ಯಾ, ಚೀನಾ, ಈಜಿಪ್ಟ್, ಇಂಡೋನೇಷ್ಯಾ, ಯುಎಇ, ಬೆಲಾರಸ್, ಕಝಾಕಿಸ್ತಾನ್, ದಕ್ಷಿಣ ಆಫ್ರಿಕಾ, ಇರಾನ್ ಹಾಗೂ ಉಜ್ಬೇಕಿಸ್ತಾನ್ ರಾಷ್ಟ್ರಗಳ ನ್ಯಾಯಾಂಗ ನಾಯಕರೊಂದಿಗೆ ಅವರು ಚರ್ಚೆ ನಡೆಸಲಿದ್ದಾರೆ. ಈ ದ್ವಿಪಕ್ಷೀಯ ಸಭೆಗಳು ಪರಸ್ಪರ ನ್ಯಾಯಾಂಗ ಹಿತಾಸಕ್ತಿಗಳ ವಿಷಯಗಳಲ್ಲಿ ನೇರ ಸಂವಾದಕ್ಕೆ ಅವಕಾಶ ನೀಡುವುದಲ್ಲದೆ, ಪಾಲ್ಗೊಳ್ಳುವ ದೇಶಗಳ ನ್ಯಾಯಾಂಗ ವ್ಯವಸ್ಥೆಗಳ ನಡುವಿನ ಬಾಂಧವ್ಯವನ್ನು ಮತ್ತಷ್ಟು ಬಲಪಡಿಸಲಿವೆ.

***************

ದೇಶಾದ್ಯಂತ ಇಂದು ಶ್ರೀಕೃಷ್ಣ ಜನ್ಮಾಷ್ಟಮಿ ಹಬ್ಬವನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಗುತ್ತಿದೆ. ಶ್ರೀಕೃಷ್ಣನ ಜನ್ಮವನ್ನು ಸ್ಮರಿಸುವ ಈ ಸಂದರ್ಭದಲ್ಲಿ ಭಕ್ತರು ಉಪವಾಸ ಕೈಗೊಂಡು, ವಿವಿಧ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಿ, ದೇವಾಲಯಗಳಿಗೆ ಭೇಟಿ ನೀಡುತ್ತಿದ್ದಾರೆ. ಶ್ರೀಕೃಷ್ಣನಿಗೆ ಪ್ರಿಯವಾದ ಸಿಹಿತಿಂಡಿಗಳು ಹಾಗೂ ವಿವಿಧ ಖಾದ್ಯಗಳನ್ನು ತಯಾರಿಸಿ ನೈವೇದ್ಯವಾಗಿ ಅರ್ಪಿಸಲಾಗುತ್ತಿದೆ.

ಕೃಷ್ಣನ ಬಾಲ್ಯದ ದಿನಗಳು ಕಳೆದ ಗೋಕುಲ ಹಾಗೂ ವೃಂದಾವನ ಸೇರಿದಂತೆ ಶ್ರೀಕೃಷ್ಣನ ಜೀವನದ ವಿವಿಧ ಘಟನೆಗಳನ್ನು ಬಿಂಬಿಸುವ ದೃಶ್ಯಗಳಿಂದ ದೇವಾಲಯಗಳು ಹಾಗೂ ಮನೆಗಳನ್ನು ಅಲಂಕರಿಸಲಾಗಿದೆ.

ಶ್ರೀಕೃಷ್ಣನ ನಗರಿ ಮಥುರಾ–ವೃಂದಾವನ ಇಂದು ರಾತ್ರಿ ನಡೆಯಲಿರುವ ಅದ್ದೂರಿ ಜನ್ಮಾಷ್ಟಮಿ ಆಚರಣೆಗೆ ಸಜ್ಜಾಗಿದೆ. ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ಇಂದು ಮಥುರಾದಲ್ಲಿ ನಡೆಯಲಿರುವ ಜನ್ಮಾಷ್ಟಮಿ ಆಚರಣೆಯಲ್ಲಿ ಭಾಗವಹಿಸಲಿದ್ದಾರೆ. ದೇಶ–ವಿದೇಶಗಳಿಂದ ಅಪಾರ ಸಂಖ್ಯೆಯಲ್ಲಿ ಭಕ್ತರು ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ನಗರದಲ್ಲಿ ವ್ಯಾಪಕ ಭದ್ರತಾ ವ್ಯವಸ್ಥೆಗಳನ್ನು ಕೈಗೊಳ್ಳಲಾಗಿದೆ.

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಜನ್ಮಾಷ್ಟಮಿಯ ಅಂಗವಾಗಿ ದೇಶದ ಜನತೆಗೆ ಶುಭಾಶಯ ಕೋರಿದ್ದಾರೆ. ತಮ್ಮ ಸಂದೇಶದಲ್ಲಿ ರಾಷ್ಟ್ರಪತಿಯವರು, ಶ್ರೀಕೃಷ್ಣನ ಜೀವನ ಮತ್ತು ಬೋಧನೆಗಳು ಭಾರತದ ಸಾಂಸ್ಕೃತಿಕ ಹಾಗೂ ತಾತ್ವಿಕ ಪರಂಪರೆಗೆ ಹೊಸ ಚೈತನ್ಯ ನೀಡಿವೆ ಎಂದು ಹೇಳಿದ್ದಾರೆ.

ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರು ಜನ್ಮಾಷ್ಟಮಿಯ ಅಂಗವಾಗಿ ಜನತೆಗೆ ಶುಭಾಶಯ ಕೋರಿದ್ದು, ಭಗವದ್ಗೀತೆಯ ಆಳವಾದ ಜ್ಞಾನವು ಕರ್ತವ್ಯ, ನೈತಿಕತೆ, ನ್ಯಾಯ, ಜ್ಞಾನ, ಧೈರ್ಯ ಹಾಗೂ ಜೀವನದಲ್ಲಿ ಸಮತೋಲನ ಕಾಯ್ದುಕೊಳ್ಳುವ ಕುರಿತು ಸಾರ್ವಕಾಲಿಕ ಮಾರ್ಗದರ್ಶನ ನೀಡುತ್ತದೆ ಎಂದು ಅವರು ತಿಳಿಸಿದ್ದಾರೆ.

**************

ನೇಪಾಳದ ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಪ್ರಸ್ತುತ ನಡೆಯುತ್ತಿರುವ ರಕ್ಷಣೆ ಹಾಗೂ ಪರಿಹಾರ ಕಾರ್ಯಾಚರಣೆಗೆ ಬೆಂಬಲವಾಗಿ ಭಾರತವು ಮತ್ತಷ್ಟು ಪರಿಹಾರ ಸಾಮಗ್ರಿಗಳೊಂದಿಗೆ ಎರಡು ವಿಮಾನಗಳನ್ನು ಕಳುಹಿಸಿಕೊಟ್ಟಿದೆ.

ಒಟ್ಟು 21.5 ಟನ್ ತೂಕದ ಮಾನವೀಯ ಪರಿಹಾರ ಸಾಮಗ್ರಿಗಳನ್ನು ಹೊತ್ತ ಎರಡು ಸಿ–130ಜೆ ವಿಮಾನಗಳು ಕಠ್ಮಂಡುವಿನಲ್ಲಿ ಯಶಸ್ವಿಯಾಗಿ ಇಳಿದಿವೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ.

ಈ ಪರಿಹಾರ ಸಾಮಗ್ರಿಗಳನ್ನು ನೇಪಾಳದ ವಿಜ್ಞಾನ, ತಂತ್ರಜ್ಞಾನ ಮತ್ತು ನಾವೀನ್ಯತೆ ಸಚಿವ ಮಹಾವೀರ್ ಪುನ್ ಅವರಿಗೆ ಅಧಿಕೃತವಾಗಿ ಹಸ್ತಾಂತರಿಸಲಾಯಿತು.

**************

ನೇಪಾಳದ ಭೀಕರ ಪ್ರವಾಹದಲ್ಲಿ ನಾಪತ್ತೆಯಾದ ಭಾರತೀಯರ ಪತ್ತೆಗೆ ಅನುಕೂಲವಾಗುವಂತೆ, ಅವರ ಮೊದಲ ಹಂತದ ಸಂಬಂಧಿಕರ ಅಂದರೆ ತಂದೆ, ತಾಯಿ, ಮಕ್ಕಳ ಡಿಎನ್‌ಎ ಮಾದರಿ ಸಂಗ್ರಹಿಸಿ ಪ್ರೊಫೈಲ್ ಸಿದ್ಧಪಡಿಸಲು ಕೇಂದ್ರ ಗೃಹ ಸಚಿವಾಲಯ ನಿರ್ಧರಿಸಿದೆ.

ಇದಕ್ಕಾಗಿ ದೇಶದ ಕೇಂದ್ರ ಹಾಗೂ ರಾಜ್ಯ ವಿಧಿವಿಜ್ಞಾನ ಪ್ರಯೋಗಾಲಯಗಳು ಮತ್ತು ರಾಷ್ಟ್ರೀಯ ವಿಧಿವಿಜ್ಞಾನ ವಿಜ್ಞಾನ ವಿಶ್ವವಿದ್ಯಾಲಯದ ಕೇಂದ್ರಗಳನ್ನು ಬಳಸಿಕೊಳ್ಳಬಹುದು ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

ನೇಪಾಳ ಪೊಲೀಸರ ಸೂಚನೆಯಂತೆ 'ಆಟೋಸೋಮಲ್ ಎಸ್‌ಟಿಆರ್' ಡಿಎನ್‌ಎ ಪ್ರೊಫೈಲಿಂಗ್ ನಡೆಸಲಾಗುತ್ತಿದ್ದು, ಸಿದ್ಧವಾದ ವರದಿಯನ್ನು ನೇರ ಇಮೇಲ್ dnacodis@nepalpolice.gov.np ಮೂಲಕ ಕಳುಹಿಸಬೇಕು.

ಸಮನ್ವಯಕ್ಕಾಗಿ ಭಾರತೀಯ ರಾಯಭಾರ ಕಚೇರಿಯ ಇಮೇಲ್ eoikathmandufloodsupport@gmail.com ಹಾಗೂ

+9779841616095 ಸಹಾಯವಾಣಿಯನ್ನು ಸಂಪರ್ಕಿಸಬಹುದಾಗಿದೆ.

**************

ದುಬೈನಲ್ಲಿ ನಿನ್ನೆ ನಡೆದ ಮಹಿಳಾ ಟಿ-20 ಏಷ್ಯಾಕಪ್ ಕ್ರಿಕೆಟ್ ಪಂದ್ಯದಲ್ಲಿ ಭಾರತದ ವನಿತೆಯರ ತಂಡ, ಹಾಂಗ್‌ಕಾಂಗ್ ವಿರುದ್ಧ 137 ರನ್‌ಗಳ ಬೃಹತ್ ಜಯ ಸಾಧಿಸುವ ಮೂಲಕ ಸೆಮಿಫೈನಲ್ ಹಂತಕ್ಕೇರಿದೆ.

ಮೊದಲು ಬ್ಯಾಟ್ ಮಾಡಿದ ಭಾರತ ತಂಡ, ಸ್ಮೃತಿ ಮಂಧನಾ ಅವರ ದಾಖಲೆ ಶತಕದ ನೆರವಿನಿಂದ ನಿಗದಿತ 20 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 193 ರನ್‌ಗಳ ಸವಾಲಿನ ಮೊತ್ತ ಕಲೆಹಾಕಿತು.

ಕೇವಲ 64 ಎಸೆತಗಳಲ್ಲಿ 124 ರನ್ ಗಳಿಸಿ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದ ಸ್ಮೃತಿ, ಮಿಥಾಲಿ ರಾಜ್ ಅವರ ದಾಖಲೆಯನ್ನು ಮುರಿದು ಮಹಿಳಾ ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಅತಿ ಹೆಚ್ಚು ರನ್ ಹಾಗೂ ಗರಿಷ್ಠ ಶತಕ ಬಾರಿಸಿದ ಬ್ಯಾಟರ್ ಎಂಬ ಜಾಗತಿಕ ದಾಖಲೆ ನಿರ್ಮಿಸಿದರು.

ಗುರಿ ಬೆನ್ನಟ್ಟಿದ ಹಾಂಗ್ ಕಾಂಗ್ ತಂಡ 56 ರನ್‌ಗಳಿಗೆ ತನ್ನೆಲ್ಲಾ ವಿಕೆಟ್ ಕಳೆದುಕೊಂಡಿತು. ಭಾರತದ ಪರ ದೀಪ್ತಿ ಶರ್ಮಾ 3 ವಿಕೆಟ್ ಕಬಳಿಸಿದರೆ, ಪ್ರೇಮಾ ರಾವತ್, ಶ್ರೀ ಚರಣಿ ಹಾಗೂ ನಂದಿನಿ ಶರ್ಮಾ ತಲಾ 2 ವಿಕೆಟ್ ಪಡೆದರು. ಈ ಗೆಲುವಿನ ಬಳಿಕ ಭಾರತ ತಂಡ ಸೆಪ್ಟೆಂಬರ್ 13 ರಂದು ನಡೆಯಲಿರುವ ತನ್ನ ಮುಂದಿನ ಗುಂಪು ಹಂತದ ಪಂದ್ಯದಲ್ಲಿ ಆಫ್ಘಾನಿಸ್ತಾನ್ ತಂಡವನ್ನು ಎದುರಿಸಲಿದೆ.

**************

ಚೀನಾದ ಶೆನ್‌ಝೆನ್‌ನಲ್ಲಿ ನಡೆಯುತ್ತಿರುವ ಚೀನಾ ಮಾಸ್ಟರ್ಸ್ ಸೂಪರ್ 750 ಬ್ಯಾಡ್ಮಿಂಟನ್ ಪಂದ್ಯಾವಳಿಯ ಪುರುಷರ ಸಿಂಗಲ್ಸ್ ಕ್ವಾರ್ಟರ್‌ಫೈನಲ್ ಪಂದ್ಯದಲ್ಲಿ ಭಾರತದ ಕಿಡಂಬಿ ಶ್ರೀಕಾಂತ್ ಇಂದು ಹೊಂಗ್ ಕಾಂಗ್‌ನ ಲೀ ಚೆಕ್ ಯು ಅವರನ್ನು ಎದುರಿಸಲಿದ್ದಾರೆ. ನಿನ್ನೆ ನಡೆದ ಪ್ರಿ-ಕ್ವಾರ್ಟರ್‌ಫೈನಲ್‌ನಲ್ಲಿ ಶ್ರೀಕಾಂತ್ ಕೆನಡಾದ ವಿಶ್ವದ 9ನೇ ಶ್ರೇಯಾಂಕಿತ ವಿಕ್ಟರ್ ಲೈ ಅವರನ್ನು 21-18, 21-19 ನೇರ ಸೆಟ್‌ಗಳಿಂದ ಮಣಿಸಿ ಎಂಟರ ಘಟ್ಟಕ್ಕೆ ಪ್ರವೇಶಿಸಿದ್ದರು.

ಮತ್ತೊಂದೆಡೆ, ಭಾರತದ ಅಗ್ರ ಪುರುಷರ ಡಬಲ್ಸ್ ಜೋಡಿ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಕ್ ಶೆಟ್ಟಿ ಕೂಡ ಕ್ವಾರ್ಟರ್‌ಫೈನಲ್‌ಗೆ ಲಗ್ಗೆಯಿಟ್ಟಿದ್ದಾರೆ. ಪ್ರಿ-ಕ್ವಾರ್ಟರ್‌ಫೈನಲ್ ಪಂದ್ಯದಲ್ಲಿ ಫ್ರಾನ್ಸ್‌ನ ಕ್ರಿಸ್ಟೋ ಮತ್ತು ಟೋಮಾ ಜೂನಿಯರ್ ಪೊಪೊವ್ ಸಹೋದರರ ವಿರುದ್ಧ 21-15, 22-24, 21-9 ಅಂತರದಿಂದ ಗೆಲುವು ಸಾಧಿಸಿದರು.

******* ಮುಕ್ತಾಯ ********